**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಗುಂಡ್ಲುಪೇಟೆ**

**ಸಿ.ಸಿ. ಸಂಖ್ಯೆ: 568/2025**

ಪ್ರಾಸಾ – 6

ಚಾಸಾ –7

**ಸಾಕ್ಷಿಯು ದಿಃ 12.01.2026 ರಂದು ನ್ಯಾಯಾಲಯದಲ್ಲಿ ಹಾಜರಿದ್ದು ಪ್ರಮಾಣ ವಚನ ಭೋಧಿಸಲಾಯಿತು.**

| | | |
|---|---|---|
| ಹೆಸರು | : | ಚೆನ್ನಸ್ವಾಮಿ |
| ತಂದೆಯ ಹೆಸರು | : | ಗಿರಿಶೆಟ್ಟಿ |
| ವಯಸ್ಸು | : | 45 ವರ್ಷ |
| ವೃತ್ತಿ | : | ಮುಖ್ಯಪೇದೆ |
| ವಾಸಸ್ಥಳ | : | ಚಾಮರಾಜನಗರ |

**ಮುಖ್ಯ ವಿಚಾರಣೆ :ಮಾನ್ಯ ಎಪಿಪಿಯವರಿಂದ :–**

ನಾನು 20.11.2020 ರಿಂದ 05.08.2025 ರವರೆಗೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿಃ 27.11.2022 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಸಂಜೆ 5.00 ಗಂಟೆ ಸಮಯದಲ್ಲಿ ಗುಂಡ್ಲುಪೇಟೆ ಸರ್ಕಾರಿ ಆಸ್ಪತ್ರೆಯಿಂದ ಎಂ.ಎಲ್.ಸಿ ಮೆಮೋ ಬಂದಿದ್ದು ಅದನ್ನು ಸ್ವೀಕರಿಸಿ ಸಂಜೆ 5.30ರ ಸಮಯಕ್ಕೆ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ವೈದ್ಯರ ಸಮಕ್ಷಮ ಚಾಸಾ 1 ರವರಿಂದ ನಿಪಿ 1 ರಂತೆ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ 1 ರಲ್ಲಿ ತಮ್ಮ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ 1(ಬಿ) ಎಂದು ಗುರ್ತಿಸಲಾಯಿತು. ತದನಂತರ ಸಂಜೆ 6.15ರ ಸಮಯಕ್ಕೆ ಠಾಣೆಗೆ ಬಂದು ಠಾ.ಮೊ. ಸಂಖ್ಯೆ 336/2022 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ಮತ್ತು ಮೇಲಧಿಕಾರಿಗಳಿಗೆ

ನಿವೇದಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 5 ಎಂದು ಗುರ್ತಿಸಲಾಯಿತು.

3. ದಿಃ 01.12.2022 ರಂದು ಚಾಸಾ 1 ರವರು ತೋರಿಸಿದ ಕೃತ್ಯ ಸ್ಥಳಕ್ಕೆ ಭೇಟಿ ನೀಡಿ ಚಾಸಾ 4 ಮತ್ತು 5 ರವರನ್ನು ಬರಮಾಡಿಕೊಂಡಿ ವಿಷಯ ತಿಳಿಸಿ ಅವರು ಒಪ್ಪಿದ ಮೇರೆಗೆ ಮಧ್ಯಾಹ್ನ 2.00 ರಿಂದ 2.30 ಗಂಟೆಯವರೆಗೆ ಪಂಚನಾಮೆ ಸಾಕ್ಷಿಗಳ ಸಮಕ್ಷಮ ಸ್ಥಳ ಪಂಚನಾಮೆ ಕ್ರಮ ಜರುಗಿಸಿ, ಸ್ಥಳದಲ್ಲಿ ಚಾಸಾ 1 ರವರು ಹಾಜರುಪಡಿಸಿದ ಮುದ್ದೆ ಮಾಲು 1 ದೊಣ್ಣೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತೇನೆ. ಅದೇ ದಿನ ನಂತರ ಠಾಣೆಗೆ ಬಂದು ಮುದ್ದೆ ಮಾಲನ್ನು ಠಾಣಾ ಮಾಲುಪಟ್ಟಿಯಲ್ಲಿ ಅಳವಡಿಸಿಕೊಂಡಿರುತ್ತೇನೆ ಎಂದು ಸಾಕ್ಷಿಯು ನಿಪಿ ಪಂಚನಾಮೆಯಲ್ಲಿ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ನಿಪಿ 2(ಸಿ) ಎಂದು ಗುರ್ತಿಸಲಾಯಿತು. ನಂತರ ಚಾಸಾ 2 ಮತ್ತು 3 ರವರ ಹೇಳಿಕೆ ದಾಖಲಿಸಿಕೊಂಡಿರುತ್ತೇನೆ. ದಿಃ 03.12.2022 ರಂದು ಎಲ್ಲ ಆರೋಪಿಗಳನ್ನು ಕರೆಸಿ ದಂಡ ಪ್ರಕ್ರಿಯಾ ಸಂಹಿತೆ ಕಲಂ 41(ಎ) ಅಡಿಯಲ್ಲಿ ನೋಟೀಸ್ ಕೊಟ್ಟು ಬಿಟ್ಟಿರುತ್ತೇನೆ ಎಂದು ಸಾಕ್ಷಿಯು 3ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ. 1, 2, 4 ಮತ್ತು 5ನೇ ಆರೋಪಿಗಳು ಗೈರು ಹಾಜರಿದ್ದು ಗುರ್ತಿಸುವಿಕೆಯ ವಿಚಾರದಲ್ಲಿ ತಕರಾರು ಇಲ್ಲ ಎಂದು ನುಡಿದ ಕಾರಣ ವಿನಾಯಿತಿ ಅರ್ಜಿಯನ್ನು ಪುರಸ್ಕರಿಸಲಾಯಿತು. ದಿಃ 10.12.2022 ರಂದು ನಿಪಿ 3 ಮತ್ತು 4 ರಂತೆ ಗಾಯದ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿರುತ್ತೇನೆ ಎಂದು ಸಾಕ್ಷಿ ಅವುಗಳಲ್ಲಿ ತಮ್ಮ ಸಹಿಗಳನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಗಳನ್ನು ನಿಪಿ 3(ಬಿ) ಮತ್ತು ನಿಪಿ 4(ಬಿ) ಎಂದು ಗುರ್ತಿಸಲಾಯಿತು. ತನಿಖೆ ಪೂರ್ಣಗೊಂಡಿದ್ದು ಆರೋಪಿಗಳ ವಿರುದ್ಧ ಆರೋಪ ಸಾಬಿತಾದ್ದರಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

**ಪಾಟೀ ಸವಾಲು :- ಆರೋಪಿಗಳ ಪರ ವಕೀಲರಿಂದ**

ಗುಂಡ್ಲುಪೇಟೆ ಸರ್ಕಾರಿ ಆಸ್ಪತ್ರೆಯಿಂದ ನನಗೆ ಯಾವುದೇ ಎಂ.ಎಲ್.ಸಿ ಮೆಮೋ ಬಂದಿಲ್ಲ ಎಂದರೆ ಸರಿಯಲ್ಲ. ಸದರಿ ಎಂ.ಎಲ್.ಸಿ ಮೆಮೋ ನ್ಯಾಯಾಲಯಕ್ಕೆ

ಹಾಜರುಪಡಿಸಿಲ್ಲ ಎಂದರೆ ಸರಿ. ನಿಪಿ 1 ಹೇಳಿಕೆ ದೂರಿನಲ್ಲಿ ವೈದ್ಯರ ಸಹಿ ಇಲ್ಲ ಎಂದರೆ ಸಾಕ್ಷಿಯು ಶ್ರೀನಿವಾಸ್ ಪ್ರಸಾದ್ ಎಂಬ ವೈದ್ಯರ ಸಹಿ ಇದೆ ಎಂದು ನೋಡಿ ಗುರುತಿಸಿರುತ್ತಾರೆ ಹಾಗಾಗಿ ಸದರಿ ಸಹಿಯನ್ನು ನಿಪಿ 1(ಸಿ) ಎಂದು ಗುರ್ತಿಸಲಾಯಿತು. ಪಂಚನಾಮೆ ಸಾಕ್ಷಿಗಳಿಗೆ ಲಿಖಿತ ನೋಟೀಸ್ ನೀಡಿದ್ದೇನೆ. ಆ ಬಗ್ಗೆ ದಾಖಲೆ ಹಾಜರುಪಡಿಸಿಲ್ಲ ಎಂದರೆ ಸರಿ. ನಾನು ಆ ದಿನ ಸ್ಥಳಕ್ಕೆ ಹೋಗಿಲ್ಲ ಮತ್ತು ಸ್ಥಳ ದಲ್ಲಿ ಮಹಜರ್ ಮಾಡಿಲ್ಲ ಎಂದರೆ ಸರಿಯಲ್ಲ. ನಾನು ಠಾಣೆಯಲ್ಲಿ ಕುಳಿತು ಮಹಜರ್ ನ್ನು ಸೃಷ್ಟಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸಾಕ್ಷಿದಾರರ ಹೇಳಿಕೆ ದಾಖಲಸಿಲ್ಲ ಎಂದರೆ ಸರಿಯಲ್ಲ. ಆರೋಪಿಗಳಿಗೂ ಈ ಪ್ರಕರಣಕ್ಕೂ ಮತ್ತು ಮು.ಮಾ 1ಕ್ಕೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ. ದೂರುದಾರರಿಗೆ ಸಹಾಯವಾಗಲಿ ಎಂದು ಗಾಯದ ಪ್ರಮಾಣಪತ್ರಗಳನ್ನು ಸೃಷ್ಟಿಸಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗಳು ಮತ್ತು ಚಾಸಾ 1 ರವರ ನಡುವೆ ಸಿವಿಲ್ ದಾವೆ ಬಾಕಿ ಇದೆ ಎಂದರೆ ಸರಿಯಲ್ಲ. ಆ ಸಂಬಂಧ ನಾನು ಯಾವುದೇ ವಿಚಾರಣೆ ಮಾಡಿಲ್ಲ ಎಂದರೆ ಸರಿ. ಆರೋಪಿಗಳ ವಿರುದ್ದ ಯಾವುದೇ ಆರೋಪ ಸಾಬಿತಾಗದೇ ಇದ್ದರೂ ಸಹ ಸುಳ್ಳು ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ ಎ ಒ

(ಶ್ರೀ. ದೀಪು ಎಂ.ಟಿ.)
ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ಗುಂಡ್ಲುಪೇಟೆ